**All India Radio: Bangalore**
**National Bulletins In Kannada**
**25.08.2025 / 19.35 pm**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**25.08.2025 / 19.35 pm**
**<><*<><>*><>**

**ಮುಖ್ಯಾಂಶಗಳು**

ಮುಖ್ಯಾಂಶಗಳು :

೧. ಆರೋಗ್ಯ, ಸಾಮರ್ಥ್ಯ ವೃದ್ಧಿ ಸೇರಿ ಏಳು ಒಪ್ಪಂದಗಳಿಗೆ ಭಾರತ-ಫಿಜಿ ಸಹಿ

೨. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಫಿಜಿ ಪ್ರಧಾನಿ ದ್ವಿಪಕ್ಷೀಯ ಮಾತುಕತೆ

೩. ಅಹಮದಾಬಾದ್‌ನಲ್ಲಿಂದು ೫ ಸಾವಿರದ ೪೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

೪. ಕಾಮನ್‌ವೆಲ್ತ್ ವೇಟ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್: ಮೀರಾಬಾಯಿ ಚಾನುಗೆ ಚಿನ್ನ

**><><><><><><><><><**

ಭಾರತ ಮತ್ತು ಫಿಜಿ ಇಂದು ನವದೆಹಲಿಯಲ್ಲಿ ಆರೋಗ್ಯ, ಸಾಮರ್ಥ್ಯ ವೃದ್ಧಿ ಸೇರಿದಂತೆ ಏಳು ಒಪ್ಪಂದಗಳನ್ನು ವಿನಿಮಯ ಮಾಡಿಕೊಂಡಿವೆ. ಫಿಜಿಯ ಪ್ರಧಾನಿ ಸಿತಿವೇನಿ ಲಿಗಮಮಾಡ ರಬುಕಾ ಅವರೊಂದಿಗಿನ ನಿಯೋಗ ಮಟ್ಟದ ಮಾತುಕತೆಯ ನಂತರ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಫಿಜಿಯ ರಾಜಧಾನಿ ಸುವಾದಲ್ಲಿ ೧೦೦ ಹಾಸಿಗೆಗಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ನಿರ್ಮಿಸಲಾಗುವುದು ಎಂದು ತಿಳಿಸಿದರು. ಜನೌಷಧ ಕೇಂದ್ರಗಳ ಸ್ಥಾಪನೆಯೊಂದಿಗೆ ಡಯಾಲಿಸಿಸ್ ಘಟಕಗಳು ಮತ್ತು ಸಮುದ್ರ ಆಂಬ್ಯುಲೆನ್ಸ್‌ಗಳನ್ನು ಕಳುಹಿಸಲಾಗುವುದು. ಇದು ಕೈಗೆಟುಕುವ ಮತ್ತು ಉತ್ತಮ ಗುಣಮಟ್ಟದ ಔಷಧವನ್ನು ಖಚಿತಪಡಿಸುತ್ತದೆ ಎಂದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ, ( ೨೦ ಸೆಕೆಂಡುಗಳು)**

ಸೈಬರ್ ಭದ್ರತೆ ಮತ್ತು ದತ್ತಾಂಶ ರಕ್ಷಣೆಯ ಕ್ಷೇತ್ರಗಳಲ್ಲಿ ತಮ್ಮ ಅನುಭವವನ್ನು ಹಂಚಿಕೊಳ್ಳಲು ಎರಡೂ ದೇಶಗಳು ಸಿದ್ಧವಾಗಿವೆ ಹಾಗೂ ಮಾನವೀಯತೆಗೆ ಭಯೋತ್ಪಾದನೆ ಒಂದು ದೊಡ್ಡ ಸವಾಲು ಎಂದು ಒಪ್ಪಿಕೊಂಡಿವೆ ಎಂದು ಪ್ರಧಾನಿ ಮೋದಿ ಹೇಳಿದರು. ಭಾರತ ಮತ್ತು ಫಿಜಿ ರಕ್ಷಣಾ ಮತ್ತು ಭದ್ರತಾ ವಲಯದಲ್ಲಿ ಪರಸ್ಪರ ಸಹಕಾರವನ್ನು ಬಲಪಡಿಸಲು ನಿರ್ಧರಿಸಿವೆ ಮತ್ತು ಈ ನಿಟ್ಟಿನಲ್ಲಿ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲಾಗಿದೆ ಎಂದು ಅವರು ತಿಳಿಸಿದರು. ಹವಾಮಾನ ಬದಲಾವಣೆಯು ಫಿಜಿಗೆ ನಿರ್ಣಾಯಕ ಬೆದರಿಕೆಯಾಗಿದೆ ಮತ್ತು ಈ ಸಂದರ್ಭದಲ್ಲಿ, ಎರಡೂ ದೇಶಗಳು ನವೀಕರಿಸಬಹುದಾದ ಇಂಧನದ ಮೇಲೆ ಒಟ್ಟಾಗಿ ಕೆಲಸ ಮಾಡುತ್ತಿವೆ ಎಂದು ಪ್ರಧಾನಿ ಮೋದಿ ಹೇಳಿದರು. ಫಿಜಿಯ ಪ್ರಧಾನಿ ಸಿತಿವೇನಿ ಲಿಗಮಮಾಡ ರಬುಕಾ ಮಾತನಾಡಿ, ಶಾಂತಿ, ಸ್ಥಿರತೆ, ಕಲ್ಯಾಣ ಮತ್ತು ಅಭಿವೃದ್ಧಿಯನ್ನು ಉತ್ತೇಜಿಸುವಲ್ಲಿ ಭಾರತ ಮತ್ತು ಫಿಜಿ ಒಟ್ಟಾಗಿ ನಿಂತಿವೆ. ಭಾರತದೊಂದಿಗಿನ ಸಂಬಂಧವನ್ನು ಅಮೂಲ್ಯವಾಗಿ ಉಳಿಸಿಕೊಳ್ಳುವುದನ್ನು ಫಿಜಿ ಮುಂದುವರಿಸುತ್ತದೆ ಎಂದು ಹೇಳಿದರು.

><><><><><><><><><><

ಫಿಜಿ ಪ್ರಧಾನಿ ಸಿಟಿವೇನಿ ಲಿಗಮಮದ ರಬುಕ ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಪೆಸಿಫಿಕ್ ದ್ವೀಪ ರಾಷ್ಟ್ರಗಳೊಂದಿಗೆ ತನ್ನ ಸಂಬಂಧಗಳು ಮತ್ತು ಅಭಿವೃದ್ಧಿ ಪಾಲುದಾರಿಕೆಯನ್ನು ಬಲಪಡಿಸಲು ಭಾರತ ಬದ್ಧವಾಗಿದೆ. ಅವುಗಳಲ್ಲಿ ಫಿಜಿ ವಿಶೇಷ ಪಾಲುದಾರನಾಗಿ ಉಳಿದಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

><><><><><><><><><><

ಗುಜರಾತ್‌ನ ಅಹಮದಾಬಾದ್‌ನ ಖೋದಲಧಾಮ ಮೈದಾನದಲ್ಲಿ ಇಂದು ೫ ಸಾವಿರದ ೪೦೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಈ ಯೋಜನೆಗಳು ನಗರಾಭಿವೃದ್ಧಿ, ಇಂಧನ, ರಸ್ತೆ ಮತ್ತು ರೈಲ್ವೆ ಇಲಾಖೆಗೆ ಸಂಬಂಧಿಸಿದ್ದಾಗಿವೆ. ಈ ಸಂದರ್ಭದಲ್ಲಿ ಪ್ರಧಾನಿ ಮೋದಿ ಅವರು ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು. ಪ್ರವಾಸದ ಎರಡನೇ ದಿನವಾದ ನಾಳೆ, ಹಂಸಲ್ಪುರದಲ್ಲಿ ಪ್ರಧಾನಿ, ಹೈಬ್ರಿಡ್ ಬ್ಯಾಟರಿ ಎಲೆಕ್ಟ್ರೋಡ್‌ಗಳ ಸ್ಥಳೀಯ ಉತ್ಪಾದನೆಗೆ ಚಾಲನೆ ನೀಡಲಿದ್ದು, ೧೦೦ ದೇಶಗಳಿಗೆ ಬ್ಯಾಟರಿ ಎಲೆಕ್ಟ್ರಿಕ್ ವಾಹನಗಳ ರಫ್ತಿಗೆ ಹಸಿರು ನಿಶಾನೆ ತೋರಿಸಲಿದ್ದಾರೆ.

><><><><><><><><><><

ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ ನವದೆಹಲಿಯಲ್ಲಿ ಇಂದು ಭಾರತೀಯ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ಸಂಸ್ಥೆ ಲಿಮಿಟೆಡ್ ಜೊತೆಗೆ ಕಾರ್ಯಕ್ಷಮತೆ ಆಧಾರಿತ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದೆ. ಈ ಒಪ್ಪಂದವು ೨೦೨೫-೨೬ರ ಆರ್ಥಿಕ ವರ್ಷದ ಕಾರ್ಯತಂತ್ರದ ಗುರಿಗಳನ್ನು ವಿವರಿಸುತ್ತದೆ. ೨೦೨೫-೨೬ರ ಆರ್ಥಿಕ ವರ್ಷಕ್ಕೆ ಕಾರ್ಯಾಚರಣೆಯಿಂದ ೮ ಸಾವಿರದ ೨೦೦ ಕೋಟಿ ರೂಪಾಯಿಗಳ ಆದಾಯದ ಗುರಿಯನ್ನು ಸರ್ಕಾರ ನಿಗದಿಪಡಿಸಿದೆ ಎಂದು ಸಚಿವಾಲಯ ತಿಳಿಸಿದೆ.

><><><><><><><><><><

ಕೃತಕ ಬುದ್ದಿಮತ್ತೆ-ಎಐ ಕ್ರಾಂತಿಗೆ ಭಾರತ ಸಾಕ್ಷಿಯಾಗುತ್ತಿದೆ. ಸಿ-ಡಾಟ್ ಸ್ಥಾಪನೆಯ ಸಮಯದಲ್ಲಿ ಗ್ರಾಮೀಣ ದೂರವಾಣಿಯಿಂದ ಈಗ ೫ಜಿ, ಆಪ್ಟಿಕಲ್ ಫೈಬರ್ ಮತ್ತು ಕ್ವಾಂಟಮ್ ಸೆಕ್ಯೂರ್ ಸಂವಹನದವರೆಗೆ ಭಾರತ ಬಹಳ ದೂರ ಸಾಗಿದೆ ಎಂದು ಕೇಂದ್ರ ಸಂವಹನ ಮತ್ತು ಗ್ರಾಮೀಣಾಭಿವೃದ್ಧಿ ರಾಜ್ಯ ಸಚಿವ ಚಂದ್ರಶೇಖರ್ ಪೆಮ್ಮಸಾನಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಟೆಲಿಮ್ಯಾಟಿಕ್ಸ್ ಅಭಿವೃದ್ಧಿ ಕೇಂದ್ರದ ೪೨ನೇ ಸಂಸ್ಥಾಪನಾ ದಿನಾಚರಣೆಯನ್ನುದ್ದೇಶಿಸಿ ಮಾತನಾಡಿದ ಅವರು, ಸ್ಥಳೀಯ ೪ಜಿ ಮತ್ತು ೫ಜಿ ತಂತ್ರಜ್ಞಾನವನ್ನು ನಿರ್ಮಿಸಿದ್ದಕ್ಕಾಗಿ ಅವರು ಸಿ-ಡಾಟ್ ಅನ್ನು ಶ್ಲಾಘಿಸಿದರು. ಒಂದು ಲಕ್ಷಕ್ಕೂ ಹೆಚ್ಚು ಬಿಎಸ್‌ಎನ್‌ಎಲ್ ಟವರ್‌ಗಳಲ್ಲಿ ಈ ತಂತ್ರಜ್ಞಾನವನ್ನು ನಿಯೋಜಿಸಲಾಗಿದೆ ಮತ್ತು ಇದು ಅದ್ಭುತವಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು. ಆಕಾಶವಾಣಿಯೊಂದಿಗೆ ಮಾತನಾಡಿದ ಸಿ-ಡಾಟ್ ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಜ್‌ಕುಮಾರ್ ಉಪಾಧ್ಯಾಯ, ೧೯೮೪ರಲ್ಲಿ ಸ್ಥಾಪನೆಯಾದ ಸಿ-ಡಾಟ್, ಭಾರತದಲ್ಲಿ ಟೆಲಿಕಾಂ ಕ್ರಾಂತಿಯನ್ನು ತಂದ ಗ್ರಾಮೀಣ ಸ್ವಯಂಚಾಲಿತ ವಿನಿಮಯ ಕೇಂದ್ರಗಳನ್ನು ನೀಡಿದೆ ಎಂದು ಹೇಳಿದರು.

><><><><><><><><><><

ಸಂವಿಧಾನದ ೧೩೦ನೇ ತಿದ್ದುಪಡಿ ಮಸೂದೆಯ ವಿರುದ್ಧದ ಪ್ರತಿಭಟನೆಗಳಿಗೆ ವಿರೋಧ ಪಕ್ಷಗಳನ್ನು ಬಿಜೆಪಿ ತರಾಟೆಗೆ ತೆಗೆದುಕೊಂಡಿದೆ. ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಬಿಜೆಪಿ ವಕ್ತಾರ ಶೆಹಜಾದ್ ಪೂನವಾಲಾ, ವಿರೋಧ ಪಕ್ಷಗಳಿಗೆ ನೈತಿಕತೆ ಮತ್ತು ಉತ್ತಮ ಆಡಳಿತದ ಕಲ್ಪನೆಯ ಬಗ್ಗೆ ಯಾವುದೇ ನಿಲುವು ಇಲ್ಲ. ಇಡೀ ದೇಶ ಮಸೂದೆಯನ್ನು ಸ್ವಾಗತಿಸಿದೆ. ಆದರೆ ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಅದನ್ನು ವಿರೋಧಿಸುತ್ತಿದ್ದಾರೆ ಎಂದು ಹೇಳಿದರು. ಮಸೂದೆಗಾಗಿ ರಚಿಸಲಾದ ಜಂಟಿ ಸಂಸದೀಯ ಸಮಿತಿಯನ್ನು ಕೆಲವರು ಬಹಿಷ್ಕರಿಸುತ್ತಿದ್ದಾರೆ. ರಾಜಕೀಯದಲ್ಲಿ ಭ್ರಷ್ಟಾಚಾರ ಮತ್ತು ಅಪರಾಧೀಕರಣದ ವಿರುದ್ಧ ಹೋರಾಡಲು ಈ ಮಸೂದೆ ಒಂದು ಸಾಧನವಾಗಿದೆ ಎಂದು ಅವರು ತಿಳಿಸಿದರು.

><><><><><><><><><><

ನ್ಯಾಯಯುತ ಮತ್ತು ಪಾರದರ್ಶಕ ಪರೀಕ್ಷೆಗಳನ್ನು ನಡೆಸಲು ಆಯೋಗ ಬದ್ಧವಾಗಿದೆ ಎಂದು ಸಿಬ್ಬಂದಿ ಆಯ್ಕೆ ಆಯೋಗ ಪುನರುಚ್ಚರಿಸಿದೆ. ನವದೆಹಲಿಯಲ್ಲಿ ಇಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ಎಸ್‌ಎಸ್‌ಸಿ ಅಧ್ಯಕ್ಷ ಎಸ್.ಗೋಪಾಲಕೃಷ್ಣನ್, ತಾಂತ್ರಿಕ ದೋಷಗಳು ಮತ್ತು ದುಷ್ಕೃತ್ಯಗಳನ್ನು ಸರಿಪಡಿಸಲು ಆಯೋಗವು ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ ಎಂದರು. ಪರೀಕ್ಷಾರ್ಥಿಯ ಸರಿಯಾದ ಗುರುತನ್ನು ಖಚಿತಪಡಿಸಿಕೊಳ್ಳಲು ಈ ವರ್ಷದ ಜುಲೈ ನಂತರ ಮೊದಲ ಬಾರಿಗೆ ಆಧಾರ್ ದೃಢೀಕರಣವನ್ನು ಬಳಸಲಾಗುತ್ತಿದೆ. ಪ್ರಮಾಣಿತ ಸೇವೆಗಳನ್ನು ಒದಗಿಸಲು ವಿಫಲವಾದ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಅವರು ಹೇಳಿದರು. ಮುಂದೂಡಲ್ಪಟ್ಟ ಸಂಯೋಜಿತ ಪದವಿ ಹಂತದ ಪರೀಕ್ಷೆಯನ್ನು ಸೆಪ್ಟೆಂಬರ್‌ನಲ್ಲಿ ನಡೆಸಲಾಗುವುದು ಎಂದು ಆಯೋಗ ಹೇಳಿದೆ.

><><><><><><><><><><

ಪಶ್ಚಿಮ ಬಂಗಾಳದಲ್ಲಿ ಶಾಲಾ ಸೇವಾ ಆಯೋಗದ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ತನಿಖೆಗೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಇಂದು ಮುರ್ಷಿದಾಬಾದ್ ಜಿಲ್ಲೆಯ ಬುರ್ವಾನ್‌ನಲ್ಲಿರುವ ತೃಣಮೂಲ ಕಾಂಗ್ರೆಸ್ ಶಾಸಕ ಜಿಬನ್ ಕೃಷ್ಣ ಸಹಾ ಅವರನ್ನು ಬಂಧಿಸಿದೆ. ಮುರ್ಷಿದಾಬಾದ್, ಬಿರ್ಭುಮ್, ಪುರುಲಿಯಾ ಮತ್ತು ಕೋಲ್ಕತ್ತಾ ಸೇರಿದಂತೆ ಹಲವು ಸ್ಥಳಗಳಲ್ಲಿ ಇ.ಡಿ. ಅಧಿಕಾರಿಗಳು ನಡೆಸಿದ ವ್ಯಾಪಕ ಶೋಧ ಕಾರ್ಯಾಚರಣೆಯ ನಂತರ ಈ ಬಂಧನ ನಡೆದಿದೆ. ಎಸ್‌ಎಸ್‌ಸಿಯಲ್ಲಿ ನೇಮಕಾತಿ-ಸಂಬಂಧಿತ ಭ್ರಷ್ಟಾಚಾರದ ಬಗ್ಗೆ ತನಿಖೆಯ ಭಾಗವಾಗಿ ಈ ದಾಳಿಗಳು ನಡೆಯುತ್ತಿವೆ. ಇದೇ ಪ್ರಕರಣದಲ್ಲಿ ಸಹಾ ಅವರನ್ನು ಈ ಹಿಂದೆ ಬಂಧಿಸಲಾಗಿತ್ತು ಮತ್ತು ನಂತರ ಜಾಮೀನಿನ ಮೇಲೆ ಬಿಡುಗಡೆ ಮಾಡಲಾಗಿತ್ತು.

><><><><><><><><><><

ಅಹಮದಾಬಾದ್‌ನಲ್ಲಿ ಇಂದು ನಡೆದ ಕಾಮನ್‌ವೆಲ್ತ್ ವೇಟ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಮೀರಾಬಾಯಿ ಚಾನು ಒಟ್ಟು ೧೯೩ ಕೆಜಿ ತೂಕವನ್ನು ಎತ್ತುವ ಮೂಲಕ ಚಿನ್ನದ ಪದಕ ಗೆದ್ದಿದ್ದಾರೆ. ಟೋಕಿಯೋ ಒಲಿಂಪಿಕ್ಸ್‌ನ ಬೆಳ್ಳಿ ಪದಕ ವಿಜೇತೆ ಮೀರಾಬಾಯಿ ಚಾನು, ಕಾಮನ್‌ವೆಲ್ತ್ ಚಾಂಪಿಯನ್‌ಶಿಪ್‌ನಲ್ಲಿ ದಾಖಲೆಯನ್ನು ಮುರಿದು ನಿರೀಕ್ಷಿತವಾಗಿ ಚಿನ್ನದ ಪದಕ ಗೆದ್ದರು.

><><><><><><><><><><

ಬಿಸಿಸಿಐ ತನ್ನ ಪ್ರಮುಖ ಪ್ರಾಯೋಜಕ ಡ್ರೀಮ್ ೧೧ ಜೊತೆಗಿನ ೩೫೮ ಕೋಟಿ ರೂಪಾಯಿಗಳ ಒಪ್ಪಂದ ರದ್ದುಗೊಳಿಸಿದೆ. ಆನ್‌ಲೈನ್ ಗೇಮಿಂಗ್ ನಿಯಂತ್ರಣ ಮಸೂದೆಯಿಂದಾಗಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಬಿಸಿಸಿಐ ಇನ್ನು ಮುಂದೆ ಇಂತಹ ಕಂಪನಿಗಳೊಂದಿಗೆ ಕೆಲಸ ಮಾಡುವುದಿಲ್ಲ ಎಂದು ಘೋಷಿಸಿದೆ. ಈ ನಿರ್ಧಾರದಿಂದ ಏಷ್ಯಾ ಕಪ್‌ಗೂ ಮುನ್ನ ಹೊಸ ಪ್ರಾಯೋಜಕರನ್ನು ಬಿಸಿಸಿಐ ಕಂಡುಕೊಳ್ಳಬೇಕಾಗಿದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿಯ ಕಾರ್ಯದರ್ಶಿ ದೇವಜಿತ್ ಸೈಕಿಯಾ ತಿಳಿಸಿದ್ದಾರೆ. ಡ್ರೀಮ್ ೧೧ ಪ್ರಮುಖ ಪ್ರಾಯೋಜಕ ಕಂಪನಿಯಾಗಿದ್ದು, ಜುಲೈ ೨೦೨೩ ರಲ್ಲಿ ೩೫೮ ಕೋಟಿ ರೂಪಾಯಿ ಮೌಲ್ಯದ, ಮೂರು ವರ್ಷಗಳ ಒಪ್ಪಂದಕ್ಕೆ ಬಿಸಿಸಿಐ ಸಹಿ ಹಾಕಿತ್ತು.

><><><><><><><><><><

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೩೨೯ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೧ ಸಾವಿರದ ೬೩೬ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೯೮ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೯೬೮ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೭ ರೂಪಾಯಿ ೫೮ ಪೈಸೆಯಷ್ಟಾಗಿದೆ

><><><><><><><><><><